ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ/42/ಇಎಸ್‌ಟಿ(1)ಎ/2018-19/1706

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಬೆಂಗಳೂರು-560 001.
ದಿನಾಂಕ: 10.09.2018.

**ಅಧಿಕೃತ ಜ್ಞಾಪನ**

**ವಿಷಯ** : ತಾಂತ್ರಿಕ ಶಿಕ್ಷಣ ಇಲಾಖೆಯ "ಯುವ ರೆಡ್ ಕ್ರಾಸ್" ಘಟಕದ ನೋಡಲ್ ಅಧಿಕಾರಿಯ ಬಗ್ಗೆ.
**ಉಲ್ಲೇಖ**: ಸರ್ಕಾರದ ಪತ್ರ ಸಂಖ್ಯೆ: ಯುಸೇಇ/ರಾಸೇಯೋ/ಸಾಮಾನ್ಯ/2018-19, ದಿ: 03.06.2018.

-*-

ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ರಾಷ್ಟ್ರೀಯ ಸೇವಾ ಯೋಜನೆ (NSS) ಹಾಗೂ ಯುವ ರೆಡ್ ಕ್ರಾಸ್ (YRC) ಘಟಕಗಳ ಜವಾಬ್ದಾರಿಗಳನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಇವರು ನಿರ್ವಹಿಸುತ್ತಿದ್ದರು. ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ವಿಶ್ವವಿದ್ಯಾನಿಲಯ / ನಿರ್ದೇಶನಾಲಯಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆ (NSS) ಹಾಗೂ ಯುವ ರೆಡ್ ಕ್ರಾಸ್ (YRC) ಘಟಕಗಳ ಜವಾಬ್ದಾರಿಗಳನ್ನು ಒಬ್ಬರೇ ನಿರ್ವಹಿಸತಕ್ಕದಲ್ಲ ಎಂದು ತಿಳಿಸಲಾಗಿದೆ.

ಆದಕಾರಣ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸರ್ಕಾರಿ / ಅನುದಾನಿತ / ಅನುದಾನ ರಹಿತ ಇಂಜಿನಿಯರಿಂಗ್ ಕಾಲೇಜು / ಪಾಲಿಟೆಕ್ನಿಕ್‌ಗಳಲ್ಲಿನ ಯುವ ರೆಡ್ ಕ್ರಾಸ್ (YRC) ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಲು ಅನುಗುಣವಾಗುವಂತೆ YRC ಘಟಕಗಳ ಮಾರ್ಗದರ್ಶನ, ಮೇಲ್ವಿಚಾರಣೆ, ಪರಿವೀಕ್ಷಣೆ, ಆಡಳಿತ ಮತ್ತು ನಿಯಂತ್ರಣಕ್ಕಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ಯುವ ರೆಡ್ ಕ್ರಾಸ್ (YRC) ಘಟಕದ ನೋಡಲ್ ಅಧಿಕಾರಿಯನ್ನಾಗಿ ಶ್ರೀ ಸತೀಶ್ ಆರ್. ಹುದ್ದಾರ್, ಉಪ ನಿರ್ದೇಶಕರು (ಸಾಂಖ್ಯಿಕ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರನ್ನು ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ನೇಮಿಸಲಾಗಿದೆ.

**ಷರತ್ತುಗಳು:-**

1. ಸದರಿಯವರು ಯುವ ರೆಡ್ ಕ್ರಾಸ್ ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸತಕ್ಕದ್ದು.
2. ಸದರಿ ಅವಧಿಯಲ್ಲಿ ಯಾವುದೇ ನಿಯೋಜನೆ ಭತ್ಯೆಗೆ ಅರ್ಹರಿರುವುದಿಲ್ಲ.

**ನಿರ್ದೇಶಕರು,**
**ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು.**

ಇವರಿಗೆ:-

ಶ್ರೀ ಸತೀಶ್ ಆರ್. ಹುದ್ದಾರ್,
ಉಪ ನಿರ್ದೇಶಕರು (ಸಾಂಖ್ಯಿಕ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು;

**ಪ್ರತಿ:-**

1. ರಾಜ್ಯ ಎಸ್.ಎಸ್.ಎಸ್. ಅಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ರಾಷ್ಟ್ರೀಯ ಸೇವಾ ಯೋಜನಾ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು;
2. ಅಧ್ಯಕ್ಷರು / ಪ್ರಧಾನ ಕಾರ್ಯದರ್ಶಿ, ಭಾರತೀಯ ರೆಡ್ ಕ್ರಾಸ್ ಸೊಸೈಟಿ, ಕರ್ನಾಟಕ ರಾಜ್ಯ ಶಾಖೆ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು;
3. ಅಧ್ಯಕ್ಷರು, ಯುವ ರೆಡ್ ಕ್ರಾಸ್, ಬೆಂಗಳೂರು;
4. ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ / ಅನುದಾನಿತ / ಅನುದಾನ ರಹಿತ ಇಂಜಿನಿಯರಿಂಗ್ ಕಾಲೇಜುಗಳು / ಪಾಲಿಟೆಕ್ನಿಕ್‌ಗಳು - ಕಾರ್ಯಕ್ರಮ ಅಧಿಕಾರಿ, ಯುವ ರೆಡ್ ಕ್ರಾಸ್ ಘಟಕ;
5. ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು;
6. ಕಛೇರಿ ಪ್ರತಿ.

OM-18